# **ಕರ್ನಾಟಕ ವಿಧಾನ ಪರಿಷತ್ತು**

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 922 |
| ಸದಸ್ಯರ ಹೆಸರು | : | ಶ್ರೀ ಗೋವಿಂದರಾಜು, (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವವರು | : | ಮಾನ್ಯ ಗಣಿ ಮತ್ತು ಭೂ ವಿಜ್ಞಾನ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು. |
| ಉತ್ತರಿಸಬೇಕಾದ ದಿನಾಂಕ | : | 21-12-2021 |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ. | ಸಮಗ್ರ ಶಿಶು ಅಭಿವೃದ್ಧಿ ಯೋಜನೆಯ (ಐ.ಸಿ.ಡಿ.ಸಿ)ಯ ಉದ್ದೇಶವೇನು ; | ಸಮಗ್ರ ಶಿಶು ಅಭಿವೃದ್ಧಿ ಯೋಜನೆಯ ಉದ್ದೇಶಗಳು ಈ ಕೆಳಕಂಡಂತಿವೆ.<br>• 0-6 ವರ್ಷದ ಮಕ್ಕಳ ಆರೋಗ್ಯ, ಪೌಷ್ಠಿಕ ಮಟ್ಟವನ್ನು ವೃದ್ಧಿಸುವುದು.<br>• ಮಗುವಿನ ದೈಹಿಕ, ಮಾನಸಿಕ ಮತ್ತು ಸಾಮಾಜಿಕ ಬೆಳವಣಿಗೆಗೆ ಭದ್ರ ಅಡಿಪಾಯ ಹಾಕುವುದು.<br>• ಮಕ್ಕಳಲ್ಲಿ ಸಾವು, ಅನಾರೋಗ್ಯ, ಅಪೌಷ್ಠಿಕತೆ ಮತ್ತು ಶಾಲಾ ಬಿಡುವಿಕೆಯನ್ನು ಕಡಿಮೆಗೊಳಿಸುವುದು.<br>• ಶಿಶು ಅಭಿವೃದ್ಧಿ ಕಾರ್ಯಕ್ರಮವನ್ನು ಉತ್ತಮಗೊಳಿಸುವ ಕಾರ್ಯನೀತಿ ಮತ್ತು ಅನುಷ್ಠಾನಗೊಳಿಸುವ ದಿಸೆಯಲ್ಲಿ ಪರಿಣಾಮಕಾರಿಯಾದ ಸಮನ್ವಯತೆಯನ್ನು ಸಾಧಿಸುವುದು.<br>• ಆರೋಗ್ಯ ಮತ್ತು ಪೌಷ್ಠಿಕತೆಯ ಶಿಕ್ಷಣವನ್ನು ನೀಡುವುದರ ಮೂಲಕ ತಾಯಂದಿರಲ್ಲಿ ತಮ್ಮ ಮಕ್ಕಳ ಆರೋಗ್ಯ ಮತ್ತು ಪೌಷ್ಠಿಕತೆಯ ಅಗತ್ಯಗಳನ್ನು ಸರಿಯಾಗಿ ನೋಡಿಕೊಳ್ಳುವ ಸಾಮರ್ಥ್ಯವನ್ನು ಹೆಚ್ಚಿಸುವುದು. |
| ಆ. | ಅಂಗನವಾಡಿಗೆ ಬರುವ ಮಕ್ಕಳಿಗೆ ಯಾವ ಯಾವ ಸೌಲಭ್ಯಗಳನ್ನು ಸರ್ಕಾರದಿಂದ ಒದಗಿಸಲಾಗಿದೆ ; | **ಪೂರಕ ಪೌಷ್ಠಿಕ ಆಹಾರ :**<br>ಅಂಗನವಾಡಿ ಕೇಂದ್ರಗಳಲ್ಲಿ ದಾಖಲಾದ 6 ತಿಂಗಳಿಂದ 6 ವರ್ಷದ ಮಕ್ಕಳಿಗೆ ಕೇಂದ್ರ ಸರ್ಕಾರದ ಮಾರ್ಗಸೂಚಿಯಂತೆ 300 ದಿನಗಳ ಪೂರಕ ಪೌಷ್ಠಿಕ ಆಹಾರವನ್ನು ನೀಡಲಾಗುತ್ತಿದೆ.<br>• ಎಲ್ಲಾ ಮಕ್ಕಳಿಗೆ ಅಂಗನವಾಡಿ ಕೇಂದ್ರದಲ್ಲಿ ಪ್ರತಿ ದಿನ ರೂ.8.00 ಮೌಲ್ಯದ ಪೂರಕ ಪೌಷ್ಠಿಕ ಆಹಾರವನ್ನು ನೀಡಲಾಗುತ್ತಿದೆ.<br>• ತೀವ್ರ ಅಪೌಷ್ಠಿಕ ಮಕ್ಕಳಿಗೆ ಪ್ರತಿ ದಿನ ರೂ.12.00 ಮೌಲ್ಯದ ಪೂರಕ ಪೌಷ್ಠಿಕ ಆಹಾರವನ್ನು ನೀಡಲಾಗುತ್ತಿದೆ.<br>• ಅಂಗನವಾಡಿಗೆ ಹಾಜರಾಗುವ 3 ವರ್ಷದಿಂದ 6 ವರ್ಷದ ಎಲ್ಲಾ ಮಕ್ಕಳಿಗೆ ವಾರದಲ್ಲಿ 2 ದಿನ ಮೊಟ್ಟೆಯನ್ನು ನೀಡಲಾಗುತ್ತಿದೆ.<br>• ರಾಜ್ಯ ಸರ್ಕಾರದ ಕ್ಷೀರಭಾಗ್ಯ ಯೋಜನೆಯಡಿ 6 ತಿಂಗಳಿಂದ 6 ವರ್ಷದ ಎಲ್ಲಾ ಅಂಗನವಾಡಿ ಮಕ್ಕಳಿಗೆ ವಾರದಲ್ಲಿ 5 ದಿನ 150 ಮಿ.ಲಿ ಹಾಲನ್ನು (15ಗ್ರಾಂ ಕೆನೆಭರಿತ ಹಾಲಿನಪುಡಿ, 10 ಗ್ರಾಂ ಸಕ್ಕರೆ) ನೀಡಲಾಗುತ್ತಿದೆ. |

| | | |
|---|---|---|
| | | • 6 ತಿಂಗಳಿಂದ 3 ವರ್ಷದ ತೀವ್ರ ಅಪೌಷ್ಠಿಕ ಮಕ್ಕಳಿಗೆ ಮತ್ತು 5 ಹಿಂದುಳಿದ ಜಿಲ್ಲೆಗಳಾದ ಬೀದರ್, ಕಲಬುರಗಿ, ರಾಯಚೂರು, ಯಾದಗಿರಿ ಮತ್ತು ಕೊಪ್ಪಳ ಇಲ್ಲಿಯ ಸಾಧಾರಣ ಅಪೌಷ್ಠಿಕ ಮಕ್ಕಳಿಗೆ ವಾರದಲ್ಲಿ 3 ದಿನ ಮೊಟ್ಟೆ ಹಾಗೂ 3 ದಿನ 200 ಎಂ.ಎಲ್ ಹಾಲನ್ನು, ಮೊಟ್ಟೆ ಸ್ವೀಕರಿಸದಿರುವ ಮಕ್ಕಳಿಗೆ ವಾರದಲ್ಲಿ 6 ದಿನ ಹಾಲನ್ನು ನೀಡಲಾಗುತ್ತಿದೆ.<br><br>• 3 ವರ್ಷದಿಂದ 6 ವರ್ಷದ ತೀವ್ರ ಅಪೌಷ್ಠಿಕ ಮಕ್ಕಳಿಗೆ ಮತ್ತು 5 ಹಿಂದುಳಿದ ಜಿಲ್ಲೆಗಳಾದ ಬೀದರ್, ಕಲಬುರಗಿ, ರಾಯಚೂರು, ಯಾದಗಿರಿ ಮತ್ತು ಕೊಪ್ಪಳ ಇಲ್ಲಿಯ ಸಾಧಾರಣ ಅಪೌಷ್ಠಿಕ ಮಕ್ಕಳಿಗೆ ವಾರದಲ್ಲಿ 5 ದಿನ ಮೊಟ್ಟೆ ಹಾಗೂ 3 ದಿನ 200 .ಎಂ.ಎಲ್ ಹಾಲನ್ನು, ಮೊಟ್ಟೆ ಸ್ವೀಕರಿಸದಿರುವ ಮಕ್ಕಳಿಗೆ ವಾರದಲ್ಲಿ 6 ದಿನ ಹಾಲನ್ನು ನೀಡಲಾಗುತ್ತಿದೆ.<br><br>• ತೀವ್ರ ಅಪೌಷ್ಠಿಕ ಮಕ್ಕಳಿಗೆ ಆರೋಗ್ಯ ಇಲಾಖೆಯ ಪೌಷ್ಠಿಕ ಪುನರ್ವಸತಿ ಕೇಂದ್ರ (NRC) ಗಳಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ.<br><br>• ಆರೋಗ್ಯ ಮತ್ತು ಪೌಷ್ಠಿಕ ಶಿಬಿರಗಳನ್ನು ಏರ್ಪಡಿಸಿ ಅಧಿಕ ಪೌಷ್ಠಿಕತೆಯುಳ್ಳ ಆಹಾರಗಳನ್ನು ತಯಾರಿಸುವ ಕುರಿತು ಮತ್ತು ಮಕ್ಕಳಿಗೆ ಪೌಷ್ಠಿಕತೆಯುಳ್ಳ ಆಹಾರವನ್ನು ನೀಡಲು ತಿಳುವಳಿಕೆ ನೀಡಲಾಗುತ್ತಿದೆ.<br><br>**ಚುಚ್ಚುಮದ್ದು ಕಾರ್ಯಕ್ರಮ :**<br><br>6 ವರ್ಷದೊಳಗಿನ ಎಲ್ಲಾ ಮಕ್ಕಳಿಗೆ ಮತ್ತು ಗರ್ಭಿಣಿಯರಿಗೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸಹಯೋಗದೊಂದಿಗೆ ನಿಗದಿತ ಚುಚ್ಚುಮದ್ದನ್ನು ನೀಡಲಾಗುತ್ತಿದೆ.<br><br>**ಆರೋಗ್ಯ ತಪಾಸಣೆ :**<br><br>ಅಂಗನವಾಡಿ ಕೇಂದ್ರದಲ್ಲಿ ದಾಖಲಾಗಿರುವ ಎಲ್ಲಾ ಮಕ್ಕಳ ಆರೋಗ್ಯ ತಪಾಸಣೆಯನ್ನು ನಿಯಮಿತವಾಗಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸಹಯೋಗದೊಂದಿಗೆ ನಡೆಸಲಾಗುತ್ತಿದೆ.<br><br>**ಮಾಹಿತಿ ಸೇವೆ :**<br><br>ಅಂಗನವಾಡಿ ಕೇಂದ್ರಗಳಿಗೆ ವೈದ್ಯಾಧಿಕಾರಿಗಳು ಭೇಟಿ ನೀಡಿ ಮಕ್ಕಳ ಆರೋಗ್ಯ ತಪಾಸಣೆ ಮಾಡಿದಾಗ ಹೆಚ್ಚಿನ ತಪಾಸಣೆಗೆ ಅಥವಾ ಚಿಕಿತ್ಸೆಗೆ ತಾಲ್ಲೂಕು ಆರೋಗ್ಯ ಕೇಂದ್ರ / ಜಿಲ್ಲಾ ಆರೋಗ್ಯ ಕೇಂದ್ರಕ್ಕೆ / ಪೌಷ್ಠಿಕ ಪುನರ್ವಸತಿ ಕೇಂದ್ರಗಳಿಗೆ ಕಳುಹಿಸಲು ಸೂಚಿಸುತ್ತಾರೆ. ವೈದ್ಯರು ಸೂಚಿಸಿದಂತೆ ಅಂಗನವಾಡಿ ಕಾರ್ಯಕರ್ತೆಯು ಹೆಚ್ಚಿನ ಚಿಕಿತ್ಸೆ, ತಪಾಸಣೆಗೆ ಮಕ್ಕಳನ್ನು ಕಳುಹಿಸಿಕೊಡುತ್ತಾರೆ. |

| | | |
|---|---|---|
| | | **ಶಾಲಾಪೂರ್ವ ಶಿಕ್ಷಣ :**<br><br>ಅಂಗನವಾಡಿ ಕೇಂದ್ರಕ್ಕೆ 3 ರಿಂದ 6 ವರ್ಷದ ಮಕ್ಕಳು ಮಾತ್ರ ಪ್ರತೀ ದಿನ ಬೆಳಿಗ್ಗೆ 9.30 ರಿಂದ ಸಂಜೆ 4.00 ಗಂಟೆಯವರೆಗೆ ಹಾಜರಾಗುತ್ತಾರೆ. ಈ ಮಕ್ಕಳಿಗೆ ಅಂಗನವಾಡಿ ಕಾರ್ಯಕರ್ತೆಯು ರೂಢಿಗತವಲ್ಲದ ಶಾಲಾಪೂರ್ವ ಶಿಕ್ಷಣವನ್ನು ನೀಡುತ್ತಾರೆ. |
| ಇ. | ಈ ಕಾರ್ಯಕ್ರಮಗಳಿಗೆ ಕೇಂದ್ರ ಸರ್ಕಾರದ ಅನುದಾನವೆಷ್ಟು; ಹಾಗೂ ರಾಜ್ಯ ಸರ್ಕಾರದ ಅನುದಾನವೆಷ್ಟು; (ವಿವರಗಳನ್ನು ಒದಗಿಸುವುದು) | ಸದರಿ ಕಾರ್ಯಕ್ರಮಗಳಿಗೆ ಕೇಂದ್ರ ಸರ್ಕಾರದಿಂದ ಶೇ.50 ಮತ್ತು ರಾಜ್ಯ ಸರ್ಕಾರದಿಂದ ಶೇ.50 ರಷ್ಟು ಅನುದಾನವನ್ನು ಒದಗಿಸಲಾಗುತ್ತಿದೆ.<br><br>2021-22ನೇ ಸಾಲಿನ ಅನುದಾನದ ವಿವರ ಈ ಕೆಳಗಿನಂತಿದೆ.<br><br>**(ರೂ.ಲಕ್ಷಗಳಲ್ಲಿ)** |

| ಕೇಂದ್ರ ಸರ್ಕಾರದಿಂದ ನಿಗದಿಪಡಿಸಿದ ಅನುದಾನ | ಬಿಡುಗಡೆ ಮಾಡಿದ ಅನುದಾನ (ಅಕ್ಟೋಬರ್-2021ರ ಅಂತ್ಯಕ್ಕೆ) | ರಾಜ್ಯ ಸರ್ಕಾರದಿಂದ ನಿಗದಿಪಡಿಸಿದ ಅನುದಾನ | ಬಿಡುಗಡೆ ಮಾಡಿದ ಅನುದಾನ (ಅಕ್ಟೋಬರ್-2021ರ ಅಂತ್ಯಕ್ಕೆ) |
|---|---|---|---|
| 59944.17 | 26825.01 | 137375.03 | 121200.66 |

| | | |
|---|---|---|
| ಈ. | ಮಕ್ಕಳಿಗೆ ವಾರದಲ್ಲಿ ನೀಡಲಾಗುವ ತಿಂಡಿಗಳಾವುವು; (ವಿವರ ಒದಗಿಸುವುದು). | ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿನ ಜಿಲ್ಲಾ ಮೇಲ್ವಿಚಾರಣಾ ಸಮಿತಿಯು ಜಿಲ್ಲೆಗಳಲ್ಲಿ ಮೆನುವನ್ನು ನಿಗಧಿಪಡಿಸುತ್ತದೆ.<br><br>ಮಕ್ಕಳಿಗೆ ವಾರದಲ್ಲಿ ನೀಡಲಾಗುವ ಆಹಾರ ಪದಾರ್ಥಗಳ ವಿವರವನ್ನು ಅನುಬಂಧದಲ್ಲಿ ಒದಗಿಸಲಾಗಿದೆ. |
| ಉ. | ಮಹಿಳಾ ಪೂರಕ ಪೌಷ್ಠಿಕ ಕೇಂದ್ರ (ಎಂ.ಎಸ್.ಪಿ.ಟಿ.ಸಿ)ಗಳ ಮೂಲಕ ವಿತರಿಸುವ ಗೋಧಿ, ರವೆ, ಅಕ್ಕಿ, ಹೆಸರುಕಾಳು ಹಾಗೂ ಇನ್ನಿತರ ಪದಾರ್ಥಗಳನ್ನು ಮಾಸ್ಟರ್ ಬ್ಯಾಗ್‌ನಲ್ಲಿ ಹಾಕಿ ಅಂಗನವಾಡಿಗೆ ವಿತರಿಸುವ ಪದ್ಧತಿ ಇದೆಯೇ; | ಮಾಸ್ಟರ್ ಬ್ಯಾಗ್‌ಗೆ ತಗಲುವ ವೆಚ್ಚ ಹೆಚ್ಚಾಗುವುದರಿಂದ ಫಲಾನುಭವಿಗಳಿಗೆ ನಿಗದಿಪಡಿಸಿದ ಘಟಕ ವೆಚ್ಚದಲ್ಲಿ ನಿಗದಿತ ಪ್ರಮಾಣದಲ್ಲಿ ಪೂರಕ ಪೌಷ್ಠಿಕ ಆಹಾರವನ್ನು ವಿತರಿಸಲು ಕಷ್ಟಸಾಧ್ಯವಾಗುವುದರಿಂದ ಮಾಸ್ಟರ್ ಬ್ಯಾಗ್‌ನಲ್ಲಿ ಆಹಾರ ಪದಾರ್ಥಗಳನ್ನು ವಿತರಿಸುತ್ತಿರುವುದಿಲ್ಲ. |
| ಊ. | ಹಾಗಿದ್ದಲ್ಲಿ, ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಪ್ರಸ್ತುತ ಬ್ಯಾಗಿನಲ್ಲಿ ನೀಡುವ ಪದ್ಧತಿ ಇದೆಯೇ; (ಜಿಲ್ಲಾವಾರು ವಿವರ ನೀಡುವುದು) | ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಪ್ರಸ್ತುತ ಬ್ಯಾಗಿನಲ್ಲಿ ನೀಡುವ ಪದ್ಧತಿ ಇರುವುದಿಲ್ಲ. |
| ಋ. | ಅಪೌಷ್ಠಿಕ ಮಕ್ಕಳ ವೈದ್ಯಕೀಯ ವೆಚ್ಚ ಭರಿಸುವ ಯೋಜನೆ ಇದೆಯೇ; ಇದ್ದಲ್ಲಿ, ಔಷಧೋಪಚಾರ ಹಾಗೂ ಚಿಕಿತ್ಸೆಗೆ ಪ್ರತಿ ಮಗುವಿಗೆ ವರ್ಷಕ್ಕೆ ಎಷ್ಟು ಹಣವನ್ನು ನಿಗದಿ ಪಡಿಸಲಾಗಿದೆ? | 2021-22ನೇ ಸಾಲಿನಿಂದ ಅಪೌಷ್ಠಿಕ ಮಕ್ಕಳ ವೈದ್ಯಕೀಯ ವೆಚ್ಚ ಭರಿಸುವ ಯೋಜನೆಯನ್ನು ಸ್ಥಗಿತಗೊಳಿಸಲಾಗಿದೆ. |

**ಸಂ: ಮಮಇ 322 ಐಸಿಡಿ 2021**

Halappa B.A

**(ಆಚಾರ ಹಾಲಪ್ಪ ಬಸಪ್ಪ)**
ಗಣಿ ಮತ್ತು ಭೂ ವಿಜ್ಞಾನ, ಮಹಿಳಾ ಮತ್ತು
ಮಕ್ಕಳ ಅಭಿವೃದ್ಧಿ, ವಿಕಲಚೇತನರ ಹಾಗೂ
ಹಿರಿಯ ನಾಗರೀಕರ ಸಬಲೀಕರಣ ಸಚಿವರು.

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಗೋವಿಂದರಾಜು ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 922 ಕ್ಕೆ ಒದಗಿಸಲಾದ ಅನುಬಂಧ**

**ಅಂಗನವಾಡಿ ಕೇಂದ್ರದ ಫಲಾನುಭವಿಗಳಿಗೆ ನೀಡುತ್ತಿರುವ ಆಹಾರ**

1) **06 ತಿಂಗಳಿಂದ 3 ವರ್ಷದ ಮಕ್ಕಳಿಗೆ:** (ಮನೆಗೆ ವಿತರಿಸಲು) : **ಘಟಕ ವೆಚ್ಚ ರೂ.8/-**

| | |
|---|---|
| ನ್ಯೂಟ್ರಿಮಿಕ್ಸ್ (ಪುಷ್ಠಿ) | ಹುರಿದ ಅಕ್ಕಿ / ಗೋಧಿ / ಹೆಸರುಕಾಳು / ಹುರಿಗಡಲೆ/ ಕಡಲೆಕಾಯಿ ಬೀಜ / ಸಕ್ಕರೆ |
| 150 ಎಂ.ಎಲ್. ಹಾಲು | ಹಾಲಿನ ಪುಡಿ, ಸಕ್ಕರೆ |

2) **3 ರಿಂದ 6 ವರ್ಷದ ಮಕ್ಕಳಿಗೆ ಅಂಗನವಾಡಿ ಕೇಂದ್ರದಲ್ಲಿ ನೀಡುವ ಆಹಾರದ ಪ್ರಮಾಣ ಘಟಕ ವೆಚ್ಚ ರೂ.8/-**

| ಕ್ರ.ಸಂ | **ಆಹಾರಗಳ ಹೆಸರು** | ಷರಾ |
|---|---|---|
| 1 | 150 ಎಂ.ಎಲ್. ಹಾಲು | ಹಾಲಿನ ಪುಡಿ, ಸಕ್ಕರೆ |
| 2 | ಮೊಳಕೆಭರಿಸಿದ ಕಾಳು / ಶೇಂಗಾ ಬೀಜದ ಚಿಕ್ಕಿ | ಹೆಸರುಕಾಳು / ಶೇಂಗಾಬೀಜ ಮತ್ತು ಬೆಲ್ಲ |
| 3 | ಅನ್ನ ಸಾಂಬಾರ್ / ಚಿತ್ರಾನ್ನ / ಗೋಧಿ ರವೆ ಪಾಯಸ | ಅಕ್ಕಿ, ತೊಗರಿಬೇಳೆ, ಸಾಂಬಾರ್ ಪದಾರ್ಥ ಅಕ್ಕಿ, ಸಾಸುವೆ, ಎಣ್ಣೆ / ಗೋಧಿರವೆ, ಬೆಲ್ಲ |
| 4 | ಮೊಟ್ಟೆ | ವಾರದಲ್ಲಿ 2 ದಿನ |

- **6 ತಿಂಗಳಿಂದ 3 ವರ್ಷದ ತೀವ್ರ ಅಪೌಷ್ಠಿಕ ಮಕ್ಕಳಿಗೆ** ಮತ್ತು 5 ಹಿಂದುಳಿದ ಜಿಲ್ಲೆಗಳಾದ ಬೀದರ್, ಕಲಬುರಗಿ, ರಾಯಚೂರು, ಯಾದಗಿರಿ ಮತ್ತು ಕೊಪ್ಪಳ ಇಲ್ಲಿಯ ಸಾಧಾರಣ ಅಪೌಷ್ಠಿಕ ಮಕ್ಕಳಿಗೆ ವಾರದಲ್ಲಿ 3 ದಿನ ಮೊಟ್ಟೆ ಹಾಗೂ 3 ದಿನ 200 ಎಂ.ಎಲ್ ಹಾಲನ್ನು, ಮೊಟ್ಟೆ ಸ್ವೀಕರಿಸದಿರುವ ಮಕ್ಕಳಿಗೆ ವಾರದಲ್ಲಿ 6 ದಿನ ಹಾಲನ್ನು ನೀಡಲಾಗುತ್ತಿದೆ.

- **3 ವರ್ಷದಿಂದ 6 ವರ್ಷದ ತೀವ್ರ ಅಪೌಷ್ಠಿಕ ಮಕ್ಕಳಿಗೆ** ಮತ್ತು 5 ಹಿಂದುಳಿದ ಜಿಲ್ಲೆಗಳಾದ ಬೀದರ್, ಕಲಬುರಗಿ, ರಾಯಚೂರು, ಯಾದಗಿರಿ ಮತ್ತು ಕೊಪ್ಪಳ ಇಲ್ಲಿಯ ಸಾಧಾರಣ ಅಪೌಷ್ಠಿಕ ಮಕ್ಕಳಿಗೆ ವಾರದಲ್ಲಿ 5 ದಿನ ಮೊಟ್ಟೆ ಹಾಗೂ 3 ದಿನ 200 ಎಂ.ಎಲ್ ಹಾಲನ್ನು, ಮೊಟ್ಟೆ ಸ್ವೀಕರಿಸದಿರುವ ಮಕ್ಕಳಿಗೆ ವಾರದಲ್ಲಿ 6 ದಿನ ಹಾಲನ್ನು ನೀಡಲಾಗುತ್ತಿದೆ.

**ಷರಾ:** ಕೋವಿಡ್-19 ಸಾಂಕ್ರಾಮಿಕದ ಹಿನ್ನೆಲೆಯಲ್ಲಿ ಅಂಗನವಾಡಿ ಕೇಂದ್ರಗಳು ಮುಚ್ಚಿರುವುದರಿಂದ ಫಲಾನುಭವಿಗಳ ಮನೆ ಬಾಗಿಲಿಗೆ ಕಚ್ಚಾ ಆಹಾರ ಪದಾರ್ಥಗಳನ್ನು ಸರಬರಾಜು ಮಾಡಲಾಗುತ್ತಿದೆ.